# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 39
2. ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ
3. ಉತ್ತರಿಸುವ ದಿನಾಂಕ : 04.07.2023
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ತೊಗರಿಗೆ ಬೆಂಬಲ ಬೆಲೆ ನೀಡಿ ಖರೀದಿಗೆ ಮಿತಿಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೊಗರಿಗೆ ಸರ್ಕಾರವು ನಿಗಧಿಪಡಿಸಿದ ಬೆಂಬಲ ಬೆಲೆ ಎಷ್ಟು; | ಹೌದು<br>2023-24ನೇ ಸಾಲಿಗೆ ಕೇಂದ್ರ ಸರ್ಕಾರವು ಎಫ್.ಎ.ಕ್ಯೂ ಗುಣಮಟ್ಟದ ಪ್ರತಿ ಕ್ವಿಂಟಾಲ್ ತೊಗರಿಗೆ ರೂ.7000/- ಗಳ ಬೆಂಬಲ ಬೆಲೆಯನ್ನು ಘೋಷಿಸಲಾಗಿರುತ್ತದೆ. |
| ಆ) | ಪಹಣಿಯಲ್ಲಿ ನಮೂದಾಗಿರುವ ಬೆಳೆಗೂ ಮಾರಾಟ ಮಾಡಲು ರೈತರು ತಂದಿರುವ ಬೆಳೆಗಳು ಬೇರೆ ಬೇರೆ ಇವೆ ಎನ್ನುವ ಕಾರಣ ನೀಡಿ ತೊಗರಿ ಖರೀದಿಸಲು ನಿರಾಕರಿಸುತ್ತಿರುವು ದರಿಂದ ರೈತರು ಮತ್ತೆ ಸಾಲಗಾರರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | FRUITS (Farmer Registration and a Unified Beneficiary Information Systems) ತಂತ್ರಾಂಶದ ಮೂಲಕ ಖರೀದಿ ಪ್ರಕ್ರಿಯೆ ಕೈಗೊಳ್ಳುತ್ತಿರುವುದರಿಂದ, ಪಹಣಿಯಲ್ಲಿ ನಮೂದಾಗಿರುವ ಬೆಳೆಗೂ ಮಾರಾಟ ಮಾಡಲು ರೈತರು ತಂದಿರುವ ಬೆಳೆಗಳು ಬೇರೆ ಬೇರೆ ಇವೆ ಎನ್ನುವ ಕಾರಣ ನೀಡಿ ತೊಗರಿ ಖರೀದಿಗೆ ನಿರಾಕರಿಸಲು ಅವಕಾಶ ಉದ್ಭವಿಸಿರುವುದಿಲ್ಲ. |
| ಇ) | ಬರಗಾಲ ಪ್ರದೇಶದ ರೈತರ ಪಹಣಿಯಲ್ಲಿ ಯಾವುದೇ ಬೆಳೆಯ ಬೆಳೆದ ಮಾಹಿತಿ ಇರಲಿ ಇಲ್ಲದಿರಲಿ ಕೂಡಲೇ ಬೆಂಬಲ ಬೆಲೆ ನೀಡಿ ಖರೀದಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಕೇಂದ್ರ ಸರ್ಕಾರವು ಪ್ರತಿ ವರ್ಷ ಮುಂಗಾರು ಹಾಗೂ ಹಿಂಗಾರು ಹಂಗಾಮಗಳ ಪೂರ್ವದಲ್ಲಿ ಬೆಂಬಲ ಬೆಲೆಯನ್ನು ಘೋಷಿಸಲಾಗುತ್ತದೆ. ರಾಜ್ಯದ ಮಾರುಕಟ್ಟೆಗಳಲ್ಲಿ ಸದರಿ ಬೆಂಬಲ ಬೆಲೆಗಿಂತ ಕಡಿಮೆ ಧಾರಣೆಯಲ್ಲಿ ಉತ್ಪನ್ನಗಳ ಮಾರಾಟವಾದ ಸಂದರ್ಭಗಳಲ್ಲಿ ಆಯಾ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಶಿಫಾರಸ್ಸಿನ ಆಧಾರದ ಮೇಲೆ ಬೆಂಬಲ ಬೆಲೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. |
| ಈ) | ರೈತರು ಬೆಳೆದ ಬೆಳೆಗೆ ಸೂಕ್ತ ಬೆಂಬಲ ಬೆಲೆ ದೊರೆತಿಲ್ಲವೆಂಬ ಕಾರಣಕ್ಕಾಗಿ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು; ಬೆಳೆದ ಬೆಳೆಯನ್ನು ಸರ್ಕಾರ ಖರೀದಿಸದೇ ಇರುವುದರಿಂದ ಕೃಷಿಗಾಗಿ ಮಾಡಿದ ಸಾಲವನ್ನು ತೀರಿಸಲಾಗದೆ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು; | ರೈತರು ಬೆಳೆದ ಬೆಳೆಗೆ ಸೂಕ್ತ ಬೆಂಬಲ ಬೆಲೆ ದೊರೆತಿಲ್ಲವೆಂಬ ಕಾರಣಕ್ಕಾಗಿ ಆತ್ಮಹತ್ಯೆ ಮಾಡಿಕೊಂಡ ಬಗ್ಗೆ ಯಾವುದೇ ಪ್ರಕರಣಗಳು ಸ್ವೀಕೃತವಾಗಿರುವುದಿಲ್ಲ. |
| ಉ) | ತೊಗರಿಗೆ ಬೆಂಬಲ ಬೆಲೆ ನೀಡಿ ಖರೀದಿಸುವ ಮಿತಿಯನ್ನು ಹೆಚ್ಚಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ಬೆಂಬಲ ಬೆಲೆ ಕೇಂದ್ರ ಸರ್ಕಾರದಿಂದ ಅನುಮೋದನೆಯಾದ ನಂತರ ಕೃಷಿ ಮತ್ತು ತೋಟಗಾರಿಕಾ ಉತ್ಪನ್ನಗಳ ಬೆಲೆ ಸ್ಥಿರೀಕರಣ ಸಚಿವ ಸಂಪುಟ ಉಪ ಸಮಿತಿ ಸಭೆಯ ತೀರ್ಮಾನದಂತೆ ಖರೀದಿಸುವ ಮಿತಿಯನ್ನು ನಿಗದಿಪಡಿಸಿ ಕ್ರಮಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಸಿಒ 115 ಎಂಆರ್‌ಇ 2023

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು